**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ** ಶಹಾಬಾದ

**CC No.73/2025**

**CW: 02 P W : 01**

**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 03.07.2026**

| | |
|---|---|
| ಹೆಸರು | : ರವಿ |
| ತಂದೆಯ ಹೆಸರು | : ಹೀರು ಪವಾರ |
| ವಯಸ್ಸು | : 45 |
| ಉದ್ಯೋಗ | : ಕೂಲಿಕೆಲಸ |
| ವಾಸಸ್ಥಳ | : ಮಾಡಬೂಳ ತಾಂಡ |

**<u>ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ಚಾಸ-3 ರವರ ಪರಿಚಯ ಇದೆ. ಚಾಸಾ-1, 4, 5 ಮತ್ತು ಆರೋಪಿಯ ಪರಿಚಯ ಇಲ್ಲಾ.

ಈ ಪ್ರಕರಣದ ಬಗ್ಗೆ ಯಾವುದೆ ಮಾಹಿತಿ ಇಲ್ಲಾ. ಪೋಲಿಸರ ಕೋರಿಕೆಯ ಮೇರೆಗೆ ನಾನು ಪೋಲಿಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸಾಕ್ಷಿಯು ಜಪ್ತಿ ಪಂಚನಾಮೆಯ ಮೇಲೆ ಇರುವ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ.1 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-1 (ಎ) ಎಂದು ಗುರುತಿಸಲಾಯಿತ್ತು. ನಿಪಿ.1 ರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಪೋಲಿಸರು ಒಂದು ದಾಖಲೆಗೆ ಸಹಿ ಪಡೆದಿರುತ್ತಾರೆ. ಇದನ್ನು ಹೊರತುಪಡಿಸಿ ಬೇರೆ ಏನು ನನಗೆ ಗೊತ್ತಿಲ್ಲ. ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಮಹಜರ ಕ್ರಮವನ್ನು ಜರಗಿಸಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ದಿನಾಂಕ : 18.09.2024 ರಂದು ಬೆಳಗ್ಗೆ 7.20 ರಿಂದ 8.20 ಗಂಟೆಯವರೆಗೆ, ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪೇಟಶಿರೂರ ಮುಖ್ಯ ರಸ್ತೆಯ ಬಳಿ ನಿಪಿ.1 ರಂತೆ ಪಂಚನಾಮೆಯನ್ನು ಮಾಡಿ ಒಂದು ಮರಳು ತುಂಬಿದ ನಿಲಿ ಬಣ್ಣ ಸ್ವರಾಜ ಕಂಪನಿಯ ಟ್ರ್ಯಾಕ್ಟರ ನೊಂದಣೆ ಸಂಖ್ಯೆ ಇರುವುದಿಲ್ಲ Chassis No.ABNKL-49AHNTh 27366 ಮತ್ತು Engine No.1353/SCH173005 ಟ್ರ್ಯಾಲಿ ನಂ ಇರುವುದಿಲ್ಲ ಇವುಗಳನ್ನು ಮರಳು ಸಹಿತ ಅಮಾನತ್ತಪಡಿಸಿಕೊಂಡು ಜಪ್ತಿ ಪಂಚನಾಮೆಯನ್ನು ನನ್ನ ಮತ್ತು ಚಾಸಾ-3 ರವರ ಸಮಕ್ಷಮ

ಚಾಸಾ-1 ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.1 ರಲ್ಲಿರುವ ವಿಷಯಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ</u>**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**ಪ್ರ.ದ.ನ್ಯಾ.ದಂ ಗಳು, ಶಹಾಬಾದ**